ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ. ಗೋವಿಂದ ರಾಜು, ಗಮನ ಸೆಳೆಯುವ ಪ್ರಶ್ನೆಗೆ ಉತ್ತರಿಸುವ ಬಗ್ಗೆ.

ವಿಷಯ: ರಾಜ್ಯದಲ್ಲಿ ವರ್ಷದಿಂದ ವರ್ಷಕ್ಕೆ ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದ್ದು, ಎರಡು ವರ್ಷ ಏಳು ತಿಂಗಳಲ್ಲಿ 18 ವರ್ಷಕಿಂತ ಕಡಿಮೆ ವಯಸ್ಸಿನ 80,813 ಬಾಲಕಿಯರು ಗರ್ಭಿಣಿಯರಾದ ಪ್ರಕರಣಗಳು ದಾಖಲಾಗಿದೆ. 2023 ರಿಂದ 2025ರ ಜುಲೈವರೆಗಿನ ಅವಧಿಯಲ್ಲಿ 14 ರಿಂದ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಗರ್ಭಿಣಿಯರಾದ ಪ್ರಕರಣಗಳ ಸಂಖ್ಯೆ ಹೆಚ್ಚಾಗಿದೆ. ಒಟ್ಟು 2023 ರಿಂದ 2025 ಜುಲೈ ಅಂತ್ಯದವರೆಗೂ ಒಟ್ಟು 80,813 ಪ್ರಕರಣಗಳು ಜರೂಗಿದೆ. ಇದಕ್ಕೆ ಕಾರಣ ಶಾಲೆ ಬಿಟ್ಟ ಮಕ್ಕಳು, ಬಾಲ್ಯವಿವಾಹ, ಮೊಬೈಲ್ ಮತ್ತಿತರ ವಸ್ತುಗಳ ಅಮಿಷ, ಸಾಮಾಜಿಕ ಮಾಧ್ಯಮಗಳ ಬಳಕೆ. ಪ್ರೀತಿಯ ನೆಪದಲ್ಲಿ ಮುದುವೆಯಾಗುವುದಾಗಿ ನಂಬಿಸಿ ಲೈಂಗಿಕವಾಗಿ ಬಳಸಿಕೊಳ್ಳುವುದು ಹೆಚ್ಚಾಗಿ ಕಂಡು ಬಂದಿದೆ. ಇದರ ಬಗ್ಗೆ ಕೂಡಲೇ ಕಠಿಣ ಕ್ರಮ ತಗೆದುಕೊಳ್ಳಬೇಕೆಂದು ಕೋರಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯನಾಗರಿಕರ ಸಬಲೀಕರಣ ಸಚಿವರ ಉತ್ತರ.

ಉತ್ತರ:-

ರಾಜ್ಯದಲ್ಲಿ 2023-24 ರಿಂದ 2025-26 ಜುಲೈ ಅಂತ್ಯದವರೆಗೆ ಆರೋಗ್ಯ ಮತ್ತು ಕುಟುಂಬ ಇಲಾಖೆಯ ಆರ್.ಸಿ.ಹೆಚ್ ಪೋರ್ಟಲ್‌ನಲ್ಲಿ ದಾಖಲಾಗಿರುವ ಗರ್ಭಿಣಿ/ಬಾಲಗರ್ಭಿಣಿಯರ ಮಾಹಿತಿ.

| ಕ್ರ. ಸಂ | ವರ್ಷ | ದಾಖಲಾಗಿರುವ ಒಟ್ಟು ಗರ್ಭಿಣಿ/ ಬಾಲಗರ್ಭಿಣಿಯರ ಸಂಖ್ಯೆ | 14 ರಿಂದ 18 ವರ್ಷದೊಳಗಿನ ಬಾಲಗರ್ಭಿಣಿ ಪ್ರಕರಣಗಳ ಸಂಖ್ಯೆ | ಶೇಕಡಾವಾರು (%) | 18 ವರ್ಷ ಮೇಲ್ಪಟ್ಟ ಗರ್ಭಿಣಿ ಪ್ರಕರಣಗಳ ಸಂಖ್ಯೆ | ಶೇಕಡಾವಾರು (%) |
|---|---|---|---|---|---|---|
| 1 | 2023-24 | 1076013 | 8666 | 0.80 | 1067347 | 99.19 |
| 2 | 2024-25 | 1067181 | 4746 | 0.04 | 1062435 | 99.55 |
| 3 | 2025-26 ಜುಲೈ ಅಂತ್ಯಕ್ಕೆ | 679640 | 1229 | 0.18 | 678411 | 99.81 |
| ಒಟ್ಟು | | **2822834** | **14641** | **1.02** | **2808193** | **298.55** |

ಬಾಲಗರ್ಭಿಣಿ ಪ್ರಕರಣಗಳು ಹೆಚ್ಚಾಗುತ್ತಿರುವ ಬಗ್ಗೆ ಕಾರಣಗಳು ಈ ಕೆಳಕಂಡಂತಿವೆ:

- ಅಪ್ರಾಪ್ತ ವಯಸ್ಸಿನ ಮಕ್ಕಳಿಂದ ಸಾಮಾಜಿಕ ಜಾಲತಾಣದ ಅತಿಯಾದ ಬಳಕೆ.
- ಹದಿಹರೆಯದ ಮಕ್ಕಳಲ್ಲಿ ಹೆಚ್ಚುತ್ತಿರುವ ಪ್ರೇಮ ಪ್ರಕರಣಗಳು.
- ತ್ವರಿತಗತಿಯಲ್ಲಿ ಬದಲಾಗುತ್ತಿರುವ ಕೌಟುಂಬಿಕ ವ್ಯವಸ್ಥೆ ಮತ್ತು ಕೌಟುಂಬಿಕ ಸಮಸ್ಯೆ.

- ಕೆಲವು ಸಮುದಾಯ ಮತ್ತು ಪಂಗಡಗಳಲ್ಲಿ ಆಚರಣೆಯಲ್ಲಿರುವ ಸಾಮಾಜಿಕ ಪದ್ಧತಿಗಳು.

**ಬಾಲಗರ್ಭಿಣಿ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ವಿವರ.**

- ರಾಜ್ಯದ ಎಲ್ಲಾ ಶಾಲಾ-ಕಾಲೇಜು ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ ಪೋಕ್ಸೋ ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾವಹಿಸ ಬೇಕಾದ ಆದ್ಯತೆಯ ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ.

- ಬಾಲ್ಯವಿವಾಹದ ಪ್ರಯತ್ನ, ನಿಶ್ಚಿತಾರ್ಥದ ಬಗ್ಗೆ ಕ್ರಮ ಕೈಗೊಳ್ಳಲು ಬಾಲ್ಯವಿವಾಹ ನಿಷೇಧ ಕಾಯ್ದೆ-2006 ರಲ್ಲಿ ಯಾವುದೇ ಕಲಂಗಳಲ್ಲಿ ಅವಕಾಶ ಇಲ್ಲದೇ ದೂರನ್ನು ದಾಖಲಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಇದನ್ನು ಅಪರಾಧವನ್ನಾಗಿಸಲು ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ -2025) ಅನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ.

- ರಾಜ್ಯದಲ್ಲಿ ಅಪ್ರಾಪ್ತ ವಯಸ್ಸಿನ ಬಾಲಕಿಯರು ಬಾಲಗರ್ಭಿಣಿಯರು ಆಗುವುದನ್ನು ತಡೆಗಟ್ಟಲು ಎಲ್ಲಾ ಭಾಗೀದಾರ ಇಲಾಖೆಗಳ ಅಧಿಕಾರಿ/ ಸಿಬ್ಬಂದಿಗಳಿಗೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಹಂತಗಳಲ್ಲಿ ಸಾಮರ್ಥ್ಯಾಭಿವೃದ್ಧಿ ತರಬೇತಿ ನೀಡಲು ಯೋಜಿಸಲಾಗುತ್ತಿದೆ.

- ಮಕ್ಕಳ ಸಹಾಯವಾಣಿ-1098 (24*7) ಕಾರ್ಯನಿರ್ವಹಿಸುತ್ತಿದೆ. ಸಂಕಷ್ಟದಲ್ಲಿರುವ ಮಗುವಿನ ಬಗ್ಗೆ ಯಾವುದೇ ಸಮಯದಲ್ಲಿ ಕರೆ ಸ್ವೀಕೃತವಾದರೂ ತಕ್ಷಣ ಮಗುವನ್ನು ರಕ್ಷಿಸಲು ಸಂಬಂಧಿಸಿದ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಿರುತ್ತಾರೆ.

- ದಿನಾಂಕ: 06.09.2024 ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.

- ಗ್ರಾಮ ಪಂಚಾಯತಿ ಮಟ್ಟದಲ್ಲಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆಗಾಗಿ ಮಹಿಳೆಯರ ಮತ್ತು ಮಕ್ಕಳ ಹಕ್ಕುಗಳ ಕಾವಲು ಸಮಿತಿಯನ್ನು ರಚಿಸಲಾಗಿದೆ.

- ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ರಚಿಸಲಾಗಿದ್ದು, ಈ ಪ್ರಕರಣಗಳ ಕುರಿತು ಪ್ರತಿ ತ್ರೈಮಾಸಿಕದಲ್ಲಿ ಪರಿಶೀಲನೆ ಮಾಡಲಾಗುತ್ತಿದೆ.

- ಆಕಾಶವಾಣಿಯಲ್ಲಿ ಸರಣಿ ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸಲಾಗಿದೆ.

- ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಮಾರ್ಗದರ್ಶನದಲ್ಲಿ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಶಾಲೆಗಳು, ವಿವಿಧ ಇಲಾಖೆಗಳು ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಲಕ್ಷಾಂತರ ಭಾಗೀದಾರರು, ಶಾಲಾ ಮಕ್ಕಳನ್ನೊಳಗೊಂಡಂತೆ ಸಾರ್ವಜನಿಕರು ಪ್ರಯೋಜನ ಪಡೆದಿರುತ್ತಾರೆ.

- ಪಾಲನೆ/ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆ ಮತ್ತು ಪುನರ್ವಸತಿಗಾಗಿ ಪ್ರತಿ ಜಿಲ್ಲೆಯಲ್ಲೂ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ವಿಶೇಷ ಪೊಲೀಸ್ ಘಟಕ, ಮಕ್ಕಳ ಪಾಲನಾ ಸಂಸ್ಥೆ ಮತ್ತು ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ.

- ಸಂತ್ರಸ್ಥ ಮಗುವಿಗೆ ಕಾನೂನು ಸಲಹೆ ಮತ್ತು ಆಪ್ತ ಸಮಾಲೋಚನೆಗಾಗಿ ಪ್ರತಿ ಜಿಲ್ಲೆಯಲ್ಲೂ ಬೆಂಬಲ ವ್ಯಕ್ತಿಗಳನ್ನು ಆಯ್ಕೆ ಮಾಡಿ ತರಬೇತಿ ನೀಡಲಾಗಿದೆ. (ಪ್ರಸ್ತುತ 173 ಬೆಂಬಲ ವ್ಯಕ್ತಿಗಳು ಕಾರ್ಯ ನಿರ್ವಹಿಸುತ್ತಿರುತ್ತಾರೆ).

- ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ (NCPCR) ವತಿಯಿಂದ ಕ್ರಮಬದ್ಧ ಕಾರ್ಯವಿಧಾನ (SOP) ರಚನೆಯಾಗಿದ್ದು, ಭಾಗೀದಾರ ಇಲಾಖೆಗಳಿಗೆ ಸದರಿ ಕಾರ್ಯ ವಿಧಾನದಂತೆ ಕಾರ್ಯನಿರ್ವಹಿಸಲು ಈಗಾಗಲೇ ತಿಳಿಸಲಾಗಿದೆ.

- ಮಕ್ಕಳ ಪಾಲನಾ ಕೇಂದ್ರಗಳಲ್ಲಿ ಸಂತ್ರಸ್ಥೆಗೆ 18 ವರ್ಷ ವಯಸ್ಸು ಪೂರ್ತಿಗೊಳ್ಳುವವರೆಗೆ ವಾಸ್ತವ್ಯಕ್ಕೆ ಅವಕಾಶ ಮಾಡಿಕೊಡಲಾಗುವುದು ಹಾಗೂ 23 ವರ್ಷದವರೆಗೂ ಅವಶ್ಯಕ ಬೆಂಬಲ ನೀಡಲಾಗುವುದು.

- ಸಂತ್ರಸ್ಥೆಗೆ ಆರೋಗ್ಯ ಸೇವೆ ಮತ್ತು ವೈದ್ಯಕೀಯ ತಪಾಸಣೆಗೆ ಒಂದು ಬಾರಿಗೆ ರೂ.6000/- ಹಾಗೂ ಶಿಕ್ಷಣ ಮುಂದುವರೆಸಲು ಇಚ್ಛಿಸಿದಲ್ಲಿ ಪ್ರಾಯೋಜಕತ್ವಯೋಜನೆಯಡಿ ಪ್ರತಿ ತಿಂಗಳಿಗೆ ರೂ.4,000/- ಗಳಂತೆ 18 ವರ್ಷ ಪೂರ್ಣಗೊಳ್ಳುವವರೆಗೂ ಆರ್ಥಿಕ ಸೌಲಭ್ಯ ಒದಗಿಸಲಾಗುವುದು.

- Pradhan Mantri Jan ArogyaYojana (PM-JAY) ಅಡಿಯಲ್ಲಿ ವರ್ಷಕ್ಕೆ ರೂ.5.00 ಲಕ್ಷಗಳ ಆರೋಗ್ಯ ವಿಮೆಯನ್ನು ಸಂತ್ರಸ್ಥೆಗೆ ಮತ್ತು ಅವಳ ನವಜಾತ ಶಿಶುವಿಗೆ ನೀಡಲಾಗುವುದು.

- ಬಾಲ್ಯವಿವಾಹ ಪ್ರಕರಣಗಳನ್ನು ತಡೆಯುವ ನಿಟ್ಟಿನಲ್ಲಿ ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯಾ ತಾಲ್ಲೂಕು ತಹಶೀಲ್ದಾರ್‌ರನ್ನು ಸಮನ್ವಯ ಹಾಗೂ ಪರಿಶೀಲನಾ ಸಮಿತಿ ಅಧ್ಯಕ್ಷರನ್ನಾಗಿ ಸರ್ಕಾರವು ನೇಮಿಸಿದೆ.

- ಬಾಲಗರ್ಭಿಣಿ ಪ್ರಕರಣಗಳು ಕಂಡುಬಂದಲ್ಲಿ ನಿಯಮಾನುಸಾರ FIR ದಾಖಲಿಸಿ ಕ್ರಮವಹಿಸಲಾಗುತ್ತಿದೆ.

- ಮಕ್ಕಳ ರಕ್ಷಣಾ ನೀತಿ -2023 ಕುರಿತು ಎಲ್ಲಾ ಶಾಲಾ-ಕಾಲೇಜುಗಳಲ್ಲಿ ಅರಿವು ಮೂಡಿಸಲಾಗಿದೆ. ಮಕ್ಕಳ ರಕ್ಷಣಾ ಸಮಿತಿಗಳನ್ನು ಪ್ರತಿ ಶಾಲೆಗಳಲ್ಲಿಯೂ ರಚಿಸಲು ಕ್ರಮವಹಿಸಲಾಗಿದೆ.

- ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದಾಖಲಾಗುವ ಬಾಲಗರ್ಭಿಣಿ/ ಬಾಲತಾಯಿ ಮತ್ತು ನವಜಾತ ಶಿಶುವಿಗೆ ಸಂಬಂಧಿಸಿದಂತೆ ಪಾಲಿಸಬೇಕಾದ ಕ್ರಮಬದ್ಧ ಕಾರ್ಯ ವಿಧಾನ (SOP) ವನ್ನು ದಿನಾಂಕ: 02.09.2025 ರಂದು ಹೊರಡಿಸಲಾಗಿದೆ.

**<u>ಸದರಿ ಪ್ರಕರಣಗಳನ್ನು ನಿಯಂತ್ರಿಸಲು ಈ ಕೆಳಕಂಡಂತೆ ಕಾಯ್ದೆ ಮತ್ತು ನಿಯಮಗಳನ್ನು ರೂಪಿಸಲಾಗಿದೆ.</u>**

- ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ-2015
- ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ತಿದ್ದುಪಡಿ ಕಾಯ್ದೆ 2021, 2016ರ ಮಾದರಿ ನಿಯಮಗಳು.
- ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ (ಪೋಕ್ಸೋ) ಕಾಯ್ದೆ-2012 ನಿಯಮಗಳು-2020.

- ಬಾಲ್ಯವಿವಾಹ ನಿಷೇಧ ಕಾಯ್ದೆ-2006,
- ಬಾಲ್ಯವಿವಾಹ ನಿಷೇಧ (ಕರ್ನಾಟಕ) ನಿಯಮಗಳು- 2014.
- ಬಾಲ್ಯವಿವಾಹ ನಿಷೇಧ (ಕರ್ನಾಟಕ ತಿದ್ದುಪಡಿ) ಕಾಯ್ದೆ-2016
- ಬಾಲಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ-1986
- ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ (ತಡೆಗಟ್ಟುವಿಕೆ) ಕಾಯ್ದೆ-1956

ಮಮಇ 176 ಮಭಾಬ 2025

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**
ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.